



ಅರುಣ ಪಿ. ಭಟ್ಟ

## ವಾರಭವಿಷ್ಯ: 30.05.2024ರಿಂದ 05.06.2024ರವರೆಗೆ




ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ವೈಯಕ್ತಿಕ ಬದುಕಿನಲ್ಲಿ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಸಂಗತಿಯೊಂದು ತಿಳಿದುಬರಲಿದೆ. ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರುಪೇರಾಗಬಹುದು. ವಾರಾಂತ್ಯಕ್ಕೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 04. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ವಿವಿಧ ಬಗೆಯಲ್ಲಿ ಯಶಸ್ಸು ದೊರೆಯಲಿದೆ. ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಬಡ್ತಿ ದೊರೆಯುವ ಯೋಗ. ಅಧಿಕಾರಿಗಳು ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಿದ್ದಾರೆ. ಪೋಷಕರು ನಿಮ್ಮ ಪ್ರಗತಿಗೆ ಸಂತೋಷಿಸುತ್ತಾರೆ. ದೀರ್ಘ ಕಾಲದಿಂದ ಇರುವ ಆರೋಗ್ಯ ಸಮಸ್ಯೆಗಳಿಂದ ಮುಕ್ತಿ ದೊರೆಯಲಿದೆ. ಶುಭದಿನ 03. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ. ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಗೊಂದಲ ಹುಟ್ಟುಹಾಕಿದ್ದ ವಿಚಾರಗಳಿಗೆ ಪರಿಹಾರ ದೊರೆಯಲಿದೆ. ಮನೆಯಲ್ಲಿ ಶುಭ ಕಾರ್ಯ ಮಾಡಲಿದ್ದೀರಿ. ವೃತ್ತಿಪರರಿಗೆ ಮೆಚ್ಚುಗೆಯ ಮಾತುಗಳನ್ನು ಕೇಳುವ ಯೋಗ ಇದೆ. ಶುಭದಿನ 01. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ ಪಡೆಯುವ ಅವಕಾಶ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ದೂರ ಪ್ರಯಾಣ ಮಾಡುವ ಯೋಗವಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ನಿಮ್ಮ ದುಡಿಮೆಗೆ ಮೆಚ್ಚುಗೆ, ಮನ್ನಣೆ ದೊರೆಯಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ 01. ಕಾಲ ಭೈರವನ ಸೇವೆ ಮಾಡಿರಿ.




ಈ ವಾರ ಉಲ್ಲಾಸಮಯವಾಗಿ ಸಮಯ ಕಳೆಯಲಿದೆ. ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಸಂಬಂಧ ದೂರ ಪ್ರಯಾಣ ಮಾಡಬೇಕಾಗುತ್ತದೆ. ವಿದೇಶದಲ್ಲೇ ನೆಲೆಯಾಗಬೇಕು ಎಂದು ಪ್ರಯತ್ನ ಮಾಡುತ್ತಿರುವವರಿಗೆ ವಿವಿಧ ಪ್ರಕ್ರಿಯೆಗಳು ಸರಾಗವಾಗಿ ಪೂರ್ಣಗೊಳ್ಳಲಿವೆ. ಶುಭದಿನ 31. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ಗೌರವ ಸನ್ಮಾನ ಪಡೆಯುವ ಅವಕಾಶ ಇದೆ. ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರುಪೇರಾಗಲಿದೆ. ಆಹಾರ ನೀರು ಸೇವನೆಯ ಬಗ್ಗೆ ಎಚ್ಚರ ಇರಲಿ. ವಾರದ ಮಧ್ಯ ಭಾಗದಲ್ಲಿ ವೈಯಕ್ತಿಕ ಬದುಕಿಗೆ ಸಂಬಂಧಪಟ್ಟಂತೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 02. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಆರೋಗ್ಯವು ಉತ್ತಮವಾಗಿ ಇರುವುದರಿಂದ ಉತ್ಸಾಹದಿಂದ ಕಾಣಿಸಿಕೊಳ್ಳಲಿದ್ದೀರಿ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ವ್ಯವಹಾರ ಮಾಡುವಾಗ ಸೂಕ್ಷ್ಮವಾಗಿ ವರ್ತಿಸಿ. ಶುಭದಿನ 04. ಲಿಂಗಾಷ್ಟಕ ಓದಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಕಾಣುವ ಸಮಯ ಇದು. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮನೆಯ ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಮನರಂಜನೆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಲು ಅವಕಾಶ ದೊರೆಯಲಿದೆ. ಹಣಕಾಸು ಹರಿವು ಹೆಚ್ಚಲಿದೆ. ಹಣ ಗಳಿಕೆಗೆ ಹಲವು ದಾರಿಗಳು ಗೋಚರಿಸಲಿವೆ. ಶುಭದಿನ 03. ಹನುಮಾನ್ ಚಾಲಿಸ್ ಓದಿರಿ.




ಮನರಂಜನೆ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸಲು ಬಯಸುವವರಿಗೆ ಅವಕಾಶ ದೊರೆಯಲಿದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡುವುದರಿಂದ ಚಿಂತೆಗೆ ಕಾರಣವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ಮನೆಯ ಚಟುವಟಿಕೆಗಳು ಬಿರುಸಾಗುತ್ತವೆ. ಹಣಕಾಸಿನ ಹರಿವು ಉತ್ತಮವಾಗಿರುತ್ತದೆ. ಹಳೆ ಸ್ನೇಹಿತರು ಶುಭ ಸುದ್ದಿ ನೀಡಲಿದ್ದಾರೆ. ಶುಭದಿನ 02. ನವದುರ್ಗಾ ಆರಾಧನೆ ಮಾಡಿರಿ.




ಪಿತ್ರಾರ್ಜಿತ ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಆಸ್ತಿ ವ್ಯವಹಾರದಲ್ಲಿ ಲಾಭ ಗಳಿಸಲಿದ್ದೀರಿ. ಕಾನೂನು ವ್ಯಾಜ್ಯಗಳು ಇದ್ದಲ್ಲಿ ಪರಿಹಾರ ದೊರೆಯಲಿದೆ. ನಾಯಕತ್ವ ಸ್ಥಾನದಲ್ಲಿ ಇರುವವರಿಗೆ ಇನ್ನಷ್ಟು ಪ್ರಾಮುಖ್ಯ ದೊರೆಯಲಿದೆ. ಅಧಿಕಾರದಲ್ಲಿ ಇರುವವರು ನಿಮ್ಮ ಕೆಲಸದ ಸಾಮರ್ಥ್ಯದ ಬಗ್ಗೆ ಮೆಚ್ಚುಗೆಯ ಮಾತುಗಳನ್ನು ಹೇಳಲಿದ್ದಾರೆ. ಶುಭದಿನ 01. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಕೌಶಲ ಹೆಚ್ಚಿಸಿಕೊಳ್ಳಲು ಹಲವು ಬಗೆಯ ಅವಕಾಶಗಳು ದೊರೆಯಲಿವೆ. ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ಪಿತ್ರಾರ್ಜಿತ ಆಸ್ತಿಯಿಂದ ಲಾಭ ಆಗುವ ಯೋಗ ಇದೆ. ಶುಭದಿನ 02. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರ ತೀರ್ಪು ಬರುವ ಸಾಧ್ಯತೆಗಳು ಹೆಚ್ಚಿವೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಪಿತ್ರಾರ್ಜಿತವಾದ ಆಸ್ತಿಯಿಂದ ಲಾಭವಿದೆ. ಶುಭದಿನ 04. ವಿಷ್ಣು ಸಹಸ್ರನಾಮ ಪಠಿಸಿರಿ.